**All India Radio: Bangalore**
**Regional Bulletin In Kannada**
**17.07.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

೧. ಸ್ವಚ್ಛ ಸರ್ವೇಕ್ಷಣೆಯಲ್ಲಿ ಸ್ವಚ್ಛ ನಗರಿಯಾಗಿ ಮೈಸೂರಿಗೆ ೩ನೇ ಸ್ಥಾನ ; ದಾವಣಗೆರೆ ಪಾಲಿಕೆಗೂ ಪ್ರಶಸ್ತಿ

೨. ಬೆಂಗಳೂರು ನಗರದಲ್ಲಿ ಎ ಖಾತಾದಂತೆ ಬಿ ಖಾತೆಗಳಿಗೂ ಅಧಿಕೃತ ಮಾನ್ಯತೆ ; ಸಂಪುಟ ಸಭೆಯಲ್ಲಿ ಮಹತ್ವದ ತೀರ್ಮಾನ

೩. ವೈದ್ಯಕೀಯ ಶಿಕ್ಷಣದಲ್ಲಿ ಬೆಂಗಳೂರಿನ ವೈದ್ಯಕೀಯ ಮತ್ತು ಸಂಶೋಧನಾ ಸಂಸ್ಥೆಗೆ ದೇಶದಲ್ಲೇ ೨ನೇ ಸ್ಥಾನ

೪. ಫೇಸ್‌ಬುಕ್‌ನಲ್ಲಿ ತಪ್ಪು ಅನುವಾದ ; ಮೆಟಾಗೆ ಪತ್ರ ಬರೆದ ಮುಖ್ಯಮಂತ್ರಿ ಕಚೇರಿ

೫. ರಾಜ್ಯದ ಹಲವೆಡೆ ಇಂದಿನಿಂದ ಮೂರು ದಿನಗಳ ಕಾಲ ಭಾರೀ ಮಳೆ ; ಕರಾವಳಿಯಲ್ಲಿ ಹಳದಿ ಅಲರ್ಟ್ ಘೋಷಣೆ

**<><><><>**

ಬಹು ನಿರೀಕ್ಷಿತ ೨೦೨೪-೨೫ನೇ ಸಾಲಿನ ಸ್ವಚ್ಚ ಸರ್ವೇಕ್ಷಣ ಅಭಿಯಾನದಲ್ಲಿ ಈ ಬಾರಿ ಮೈಸೂರು ಜಿಲ್ಲೆ ಮೂರನೇ ಸ್ಥಾನ ಗಿಟ್ಟಿಸಿಕೊಂಡಿದೆ.

೩ರಿಂದ ೧೦ಲಕ್ಷ ಜನಸಂಖ್ಯೆಯ ವಿಭಾಗದಲ್ಲಿ ನೋಯ್ಡಾ ಅತ್ಯಂತ ಸ್ವಚ್ಛ ನಗರವಾಗಿ ಹೊರಹೊಮ್ಮಿದ್ದು ಎರಡನೇ ಸ್ಥಾನದಲ್ಲಿ ಚಂಡೀಗಢ, ಮೈಸೂರು ಮೂರನೇ ಸ್ಥಾನ ಪಡೆದಿದೆ.

ನವದೆಹಲಿಯಲ್ಲಿ ನಡೆದ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮ ಅವರಿಂದ ಮೈಸೂರು ಮಹಾನಗರ ಪಾಲಿಕೆ ಅಯುಕ್ತ ಶೇಖ್ ತನ್ವೀರ್ ಆಸೀಫ್ ಪ್ರಶಸ್ತಿ ಸ್ವೀಕರಿಸಿದ್ದಾರೆ.

೨೦೧೬ ರಲ್ಲಿ ನಡೆದ ಮೊದಲ ಸ್ವಚ್ಛ ಸರ್ವೇಕ್ಷಣೆಯಲ್ಲಿ ಮೈಸೂರು ದೇಶದಲ್ಲಿಯೇ ಮೊದಲನೇ ಸ್ಥಾನ ಪಡೆದಿತ್ತು.

ಈ ಬಾರಿ ಮೈಸೂರು ೩ನೇ ಸ್ಥಾನ ಪಡೆದಿರುವುದಕ್ಕೆ ಪೌರ ಕಾರ್ಮಿಕರಾದ ಮಾರ ಹಾಗೂ ಉಮಾ ಆಕಾಶವಾಣಿಯೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ : ಮಾರ (ಪೌರ ಕಾರ್ಮಿಕ)

<><><><>

ದಾವಣಗೆರೆ ಮಹಾನಗರ ಪಾಲಿಕೆ ಸ್ವಚ್ಛ ಸರ್ವೇಕ್ಷಣ -೨೦೨೪ರ ಸಮೀಕ್ಷೆಯಲ್ಲಿ ಹಾಗೂ ಘನತ್ಯಾಜ್ಯ ನಿರ್ವಹಾಣೆಗೆ ಸಂಬಂಧಿಸಿದ ಕಾರ್ಯಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿರುವುದಕ್ಕೆ ಹಾಗೂ ಸ್ವಚ್ಛತೆಯಲ್ಲಿ ಉತ್ತಮ ಸಾಧನೆಗಾಗಿ ಕೇಂದ್ರ ಸರ್ಕಾರದ ಸಚಿವಾಲಯದ ಪ್ರಶಸ್ತಿ ಪಡೆದುಕೊಂಡಿದೆ.

ದೇಶದ ನಗರಗಳನ್ನು ಸ್ವಚ್ಛ ಮತ್ತು ಆರೋಗ್ಯಕರವಾಗಿ ಇಡುವುದು ಮತ್ತು ನಾಗರಿಕರ ಜೀವನಮಟ್ಟವನ್ನು ಸುಧಾರಿಸುವುದು ಈ ಅಭಿಯಾನದ ಉದ್ದೇಶವಾಗಿತ್ತು.

ದಾವಣಗೆರೆ ನಗರವನ್ನು ಸ್ವಚ್ಛ ಮತ್ತು ಸುಂದರವಾಗಿಸಲು ಡಿಸೆಂಬರ್‌ನಿಂದ ೨ ತಿಂಗಳುಗಳ ಕಾಲ ಸ್ವಚ್ಛತಾ ಚಟುವಟಿಕೆ ಹಮ್ಮಿಕೊಳ್ಳಲಾಗಿತ್ತು. ಕೇಂದ್ರ ಸರ್ಕಾರದ ಸ್ವಚ್ಛ ಸರ್ವೇಕ್ಷಣಾ ಸಮೀಕ್ಷಾ ತಂಡ ವಾರ್ಡ್‌ಗಳಲ್ಲಿ ನಗರದ ತ್ಯಾಜ್ಯ ವಿಲೇವಾರಿ, ನಿರ್ವಹಣೆ ಹಾಗೂ ಘಟಕಗಳಲ್ಲಿ ಸಮೀಕ್ಷೆ ನಡೆಸಿತ್ತು.

ಧ್ವನಿ : ಚೆನ್ನಬಸಪ್ಪ (ಜಿಲ್ಲಾ ಪ್ರತಿನಿಧಿ) (೩೮ ಸೆಕೆಂಡ್‌ಗಳು)

<><><><>

ಎ ಖಾತಾದಂತೆ ಬಿ ಖಾತಾಗೂ ಅಧಿಕೃತ ಮಾನ್ಯತೆ ನೀಡಲು ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಂಪುಟ ಸಭೆಯಲ್ಲಿ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ.

ಇದು ೨೦೨೦ ರಿಂದ ೨೪ರ ತನಕ ಮಾತ್ರ ಅನ್ವಯವಾಗಲಿದೆ. ಈ ಮೂಲಕ ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿ ಎ ಖಾತಾ ಹಾಗೂ ಬಿ ಖಾತಾ ಗೊಂದಲಕ್ಕೆ ತೆರೆ ಎಳೆಯಲು ಸಂಪುಟ ಸಭೆ ನಿರ್ಧರಿಸಿದೆ.

ಇದರಿಂದ ಬಿ ಖಾತೆಗಳಿಗಿದ್ದ ಬಿಬಿಎಂಪಿ ಪ್ಲಾನಿಂಗ್, ಮಾಲೀಕತ್ವ ಪ್ರಮಾಣಪತ್ರ ಹಾಗೂ ಬ್ಯಾಂಕ್ ಲೋನ್ ಸಮಸ್ಯೆಗೆ ಪರಿಹಾರ ಸಿಗಲಿದೆ.

<><><><>

ದೇಶದಲ್ಲಿ ವೈದ್ಯಕೀಯ ಶಿಕ್ಷಣ ನೀಡುವಲ್ಲಿ ಮುಂಚೂಣಿಯಲ್ಲಿರುವ ಕರ್ನಾಟಕವು ಅತ್ಯುತ್ತಮ ಕಾಲೇಜುಗಳಿಗೆ ನೆಲೆಯಾಗಿದೆ ಎಂದು ದೇಶದ ಪ್ರತಿಷ್ಠಿತ ಸಂಸ್ಥೆಗಳು ನಡೆಸಿರುವ ಸಮೀಕ್ಷೆಯಲ್ಲಿ ದೃಢಪಟ್ಟಿದೆ.

ಇಂಡಿಯಾ ಟುಡೇ ೨೦೨೪-೨೫ ಸಾಲಿನಲ್ಲಿ ನಡೆಸಿದ ಸಮೀಕ್ಷೆಯಲ್ಲಿ ಕರ್ನಾಟಕದ ಹತ್ತು ಶ್ರೇಷ್ಠ ಕಾಲೇಜುಗಳ ಪಟ್ಟಿಯನ್ನು ನೀಡಲಾಗಿದೆ. ಈ ಪಟ್ಟಿಯಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆ ಅಡಿಯಲ್ಲಿ ಬರುವ ಬೆಂಗಳೂರು ವೈದ್ಯಕೀಯ ಮತ್ತು ಸಂಶೋಧನಾ ಸಂಸ್ಥೆಯು ಎರಡನೇ ಸ್ಥಾನ ಪಡೆದಿದೆ.

ಮೆಡಿಕಲ್ ಕಾಲೇಜುಗಳಲ್ಲಿ ನೀಡುತ್ತಿರುವ ಉತ್ತಮ ಶಿಕ್ಷಣ, ಆಧುನಿಕ ಸೌಲಭ್ಯಗಳು ಹಾಗೂ ಅತ್ಯಾಧುನಿಕ ಮೂಲ ಸೌಕರ್ಯ ಬಗ್ಗೆ ಅಧ್ಯಯನ ನಡೆಸಿ ಈ ಸಮೀಕ್ಷೆ ನಡೆಸಲಾಗಿದೆ.

ಬೆಂಗಳೂರು ಮೆಡಿಕಲ್ ಕಾಲೇಜು ದೇಶದ ಪ್ರತಿಷ್ಠಿತ ಕಾಲೇಜುಗಳಲ್ಲಿ ಒಂದಾಗಿದ್ದು, ಈ ಗರಿಮೆಗೆ ಪಾತ್ರವಾಗಿರುವುದು ಹೆಮ್ಮೆಯ ವಿಷಯವಾಗಿದೆ.

<><><><>

ಮೆಟಾದ ಸ್ವಯಂ ಅನುವಾದ ವ್ಯವಸ್ಥೆಯಲ್ಲಿ ಕನ್ನಡ ಅನುವಾದದಲ್ಲಿನ ತಪ್ಪುಗಳಿಗೆ ರಾಜ್ಯ ಸರ್ಕಾರ ಕಳವಳ ವ್ಯಕ್ತಪಡಿಸಿದೆ. ಫೇಸ್‌ಬುಕ್‌ನಲ್ಲಿ ತಪ್ಪು ಅನುವಾದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಕಚೇರಿ ಮೆಟಾಗೆ ಪತ್ರ ಬರೆದಿದೆ.

ಪತ್ರದಲ್ಲಿ ತಪ್ಪುಗಳನ್ನು ಸರಿಪಡಿಸುವಂತೆ ಹಾಗೂ ಸರಿಯಾದ ಅನುವಾದಕ್ಕಾಗಿ ಕನ್ನಡ ಭಾಷಾ ತಜ್ಞರ ಸಹಾಯ ಪಡೆಯುವಂತೆ ಸಲಹೆ ನೀಡಲಾಗಿದೆ. ಕನ್ನಡ ವಿಷಯದಲ್ಲಿ ಸಂದೇಶದ ಮೂಲ ಅರ್ಥವೇ ಬದಲಾಗಿ ಜನರಲ್ಲಿ ಗೊಂದಲ ಮತ್ತು ತಪ್ಪು ತಿಳುವಳಿಕೆಗಳು ಉಂಟಾಗುತ್ತಿದ್ದು, ಸ್ವಯಂ ಅನುವಾದ ವ್ಯವಸ್ಥೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸುವಂತೆ ತಿಳಿಸಲಾಗಿದೆ.

<><><><>

ಕೇಂದ್ರ ವಾರ್ತಾ ಶಾಖೆಯ ಹೆಚ್ಚುವರಿ ಮಹಾನಿರ್ದೇಶಕರಾದ ಎಸ್.ಜಿ. ರವೀಂದ್ರ ಅಧ್ಯಕ್ಷತೆಯಲ್ಲಿ ಬೆಂಗಳೂರಿನಲ್ಲಿ ಇಂದು ಕೇಂದ್ರ ಹಣಕಾಸು ಸೇವೆಗಳ ಇಲಾಖೆ ವತಿಯಿಂದ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಆಯೋಜಿಸಿರುವ ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನ ಕುರಿತು ರಾಜ್ಯಮಟ್ಟದ ಬ್ಯಾಂಕರ್‌ಗಳ ಸಮಿತಿ ಹಾಗೂ ಕೇಂದ್ರ ವಾರ್ತಾ ಸಚಿವಾಲಯದ ಮಾಧ್ಯಮ ಘಟಕಗಳೊಂದಿಗೆ ಸಮನ್ವಯ ಸಭೆ ನಡೆಯಿತು.

ಈ ಕುರಿತು ಒಂದು ವರದಿ : ಅಕ್ಷಯ್

<><><><>

ಮಾಜಿ ಮುಖ್ಯ ಮಂತ್ರಿ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಅಧ್ಯಕ್ಷತೆಯಲ್ಲಿ ಗದಗ ಜಿಲ್ಲಾ ಪಂಚಾಯತ್ ಕಾರ್ಯಾಲಯದ ಸಭಾಂಗಣದಲ್ಲಿ

ಜಿಲ್ಲಾ ಮಟ್ಟದ ಬ್ಯಾಂಕುಗಳ ಪ್ರಗತಿ ಪರಿಶೀಲನಾ ಸಭೆ ಹಾಗೂ ಜಿಲ್ಲಾ ಮಟ್ಟದ ಬ್ಯಾಂಕುಗಳ ಸಲಹಾ ಸಮಿತಿ ಸಭೆ ಇಂದು ನಡೆಯಿತು.

ಕೇಂದ್ರ ಸರ್ಕಾರದ ವಿವಿಧ ಯೋಜನೆಗಳ ಪ್ರಗತಿ ಪರಿಶೀಲಿಸಿದ ಸಂಸದ ಬಸವರಾಜ ಬೊಮ್ಮಾಯಿ, ಅರ್ಹ ಫಲಾನುಭವಿಗಳಿಗೆ ಸಾಲ ಯೋಜನೆಗಳನ್ನು ಬ್ಯಾಂಕಿನ ಅಧಿಕಾರಿಗಳು ಸಮರ್ಪಕವಾಗಿ ತಲುಪಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸಬೇಕೆಂದು ಸೂಚಿಸಿದರು.

<><><><>

ಇನ್ನು ಹವಾವರ್ತಮಾನ,

ಕರಾವಳಿ ಹಾಗೂ ದಕ್ಷಿಣ ಒಳನಾಡಿನಲ್ಲಿ ವ್ಯಾಪಕ ಮಳೆಯಾಗಿದೆ. ದಕ್ಷಿಣಕನ್ನಡ ಜಿಲ್ಲೆಯ ಮುಲ್ಕಿಯಲ್ಲಿ ೨೦ ಸೆಂಟಿಮೀಟರ್, ಭಾಗಮಂಡಲದಲ್ಲಿ ೧೧ ಸೆಂಟಿಮೀಟರ್ ಮಳೆಯಾಗಿದೆ. ಕರಾವಳಿ ಹಾಗೂ ದಕ್ಷಿಣ ಒಳನಾಡಿನಲ್ಲಿ ಇಂದಿನಿಂದ ಇದೇ ೧೨ ರವರೆಗೆ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಉತ್ತರ ಒಳನಾಡಿನಲ್ಲಿಯೂ ಮಳೆಯಾಗಲಿದೆ. ಉತ್ತರಕನ್ನಡ, ಉಡುಪಿ, ದಕ್ಷಿಣ ಕನ್ನಡ, ಚಿಕ್ಕಮಗಳೂರು ಹಾಗೂ ಕೊಡಗು ಜಿಲ್ಲೆಗಳಲ್ಲಿ ಧಾರಾಕಾರ ಮಳೆಯಾಗಲಿದ್ದು, ಇದೇ ೧೧ರವರೆಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಬೆಂಗಳೂರಿನಲ್ಲಿಯೂ ಇದೇ ೧೧ರವರೆಗೆ ಹಗುರದಿಂದ ಮಳೆಯಾಗಲಿದೆ.

<><><><>

ಹಾಸನ ಜಿಲ್ಲೆಯಲ್ಲಿ ಅಕ್ರಮ ಬಾಂಗ್ಲಾದೇಶಿ ನುಸುಳುಕೋರರ ಬಗ್ಗೆ ಮಾಹಿತಿ ಸಂಗ್ರಹಿಸಿ ಕೇಂದ್ರ ಸರ್ಕಾರಕ್ಕೆ ವರದಿ ಸಲ್ಲಿಸುವ ಉದ್ದೇಶದಿಂದ ಬಿಜೆಪಿ ಪ್ರಮುಖ ನಾಯಕರ ತಂಡ ಹಾಸನ ಜಿಲ್ಲೆಗೆ ಆಗಮಿಸಿದೆ.

ಈ ತಂಡವು ಹಾಸನ ಜಿಲ್ಲೆಯ ಆಲೂರು ತಾಲೂಕಿನ ವಾಟೇಪುರ ಗ್ರಾಮಕ್ಕೆ ಭೇಟಿ ನೀಡಿ, ಸ್ಥಳೀಯ ಕಾರ್ಮಿಕರೊಂದಿಗೆ ಸಂವಾದ ನಡೆಸಿತು. ಹೊರ ರಾಜ್ಯದ ಕಾರ್ಮಿಕರಿಂದ ತಮಗೆ ಉದ್ಯೋಗಾವಕಾಶಗಳು ಕಡಿಮೆಯಾಗಿರುವ ಬಗ್ಗೆ ಸ್ಥಳೀಯ ಕಾರ್ಮಿಕರು, ತಮ್ಮ ಅಳಲು ತೋಡಿಕೊಂಡರು.

<><><><>

ರಸಗೊಬ್ಬರ ಕುರಿತಂತೆ ಯಾವುದೇ ದೂರುಗಳು ಬಾರದಂತೆ ಹಾಗೂ ಕಳಪೆ ಗುಣಮಟ್ಟದ ಪರಿಕರಗಳು ವಿತರಣೆಯಾದಂತೆ ಕ್ರಮವಹಿಸಬೇಕು ಎಂದು ರಾಮನಗರ ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಡಿಎಪಿ ಹಾಗೂ ಯೂರಿಯಾ ರಸಗೊಬ್ಬರ ಬಳಕೆ ಕುರಿತಂತೆ ಪರ್ಯಾಯ ರಸಗೊಬ್ಬರಗಳ ಬಳಕೆ ಬಗ್ಗೆ ವ್ಯಾಪಕ ಪ್ರಚಾರ ನೀಡಿ ರೈತರಲ್ಲಿ ಅರಿವು ಮೂಡಿಸುವಂತೆ ಸಲಹೆ ನೀಡಿದ್ದಾರೆ.

ಬೆಳೆ ಸಮೀಕ್ಷೆ ಯೋಜನೆಯಡಿ ತರಬೇತಿಗಳನ್ನು ಆಯೋಜಿಸಿ ಎಲ್ಲಾ ತಾಲುಕುಗಳಲ್ಲಿ ಬೆಳೆ ಸಮೀಕ್ಷೆ ಕಡ್ಡಾಯವಾಗಿ ಕೈಗೊಳ್ಳಲು ಕೃಷಿ ಮತ್ತು ಕೃಷಿ ಸಂಬಂಧಿತ ಇಲಾಖಾ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

<><><><>